# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು / ಉಪ ಪ್ರಾಂಶುಪಾಲರುಗಳ ಕಾರ್ಯ ಹಂಚಿಕೆ ಬಗ್ಗೆ.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂಖ್ಯೆ:ಇಡಿ 433 ಡಿಪಿಐ 2001, ದಿನಾಂಕ:09/01/2003
2. ಸರ್ಕಾರದ ಆದೇಶ ಸಂಖ್ಯೆ:ಇಡಿ 57 ಎಸ್ಎಲ್‌ಬಿ 2004, ದಿನಾಂಕ:03/12/2004
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪ್ರಸ್ತಾವನೆ ಸಂಖ್ಯೆ:ಸಿ4(3)ಸೇನಿ-35/2003-04, ದಿನಾಂಕ:09/05/2003.

**ಪ್ರಸ್ತಾವನೆ:-**

ಮೇಲೆ (1) ಮತ್ತು (2) ರಲ್ಲಿ ಓದಲಾದ ಸರ್ಕಾರದ ಆದೇಶಗಳಲ್ಲಿ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿನ ಪ್ರಾಂಶುಪಾಲರುಗಳು / ಉಪ ಪ್ರಾಂಶುಪಾಲರುಗಳು ನಿರ್ವಹಿಸಬೇಕಾದ ಕರ್ತವ್ಯ ಮತ್ತು ಅಧಿಕಾರಗಳ ಕಾರ್ಯಸೂಚಿಯನ್ನು ಹೊರಡಿಸಲಾಗಿತ್ತು. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರು ಮೇಲೆ (3) ರಲ್ಲಿ ಓದಲಾದ ಪ್ರಸ್ತಾವನೆಯಲ್ಲಿ ಪ್ರೌಢ ಶಾಲೆ / ಪದವಿ ಪೂರ್ವ ಕಾಲೇಜಿನ ಕಾರ್ಯಹಂಚಿಕೆ ಸುಗಮಗೊಳಿಸುವ ದೃಷ್ಟಿಯಿಂದ ಮೇಲೆ ಓದಲಾದ (1) ಮತ್ತು (2) ರಲ್ಲಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು / ಉಪ ಪ್ರಾಂಶುಪಾಲರುಗಳ ಕಾರ್ಯ ಹಂಚಿಕೆ ಬಗ್ಗೆ ಪರಿಷ್ಕರಿಸುವಂತೆ ಪ್ರಸ್ತಾಪಿಸಿರುತ್ತಾರೆ.

ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ / ಉಪ ಪ್ರಾಂಶುಪಾಲರ ಕಾರ್ಯ ಹಂಚಿಕೆ ಬಗ್ಗೆ ದಿನಾಂಕ:18/07/2006 ರಂದು ಸಭೆ ಜರುಗಿಸಿ, ಈ ಹಿಂದೆ ಹೊರಡಿಸಿದ ಆದೇಶಗಳನ್ನು ರದ್ದುಗೊಳಿಸಿ ಮಾರ್ಪಡಿಸಿ ಅನುಬಂಧದಲ್ಲಿರುವಂತೆ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಾಂಶುಪಾಲರ / ಉಪ ಪ್ರಾಂಶುಪಾಲರ ಕಾರ್ಯ ಹಂಚಿಕೆಯನ್ನು ಸೂಚಿಸಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 92 ಡಿಪಿಐ 2006, ದಿನಾಂಕ: 16/09/2006**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳಿಂದಾಗಿ, ಸಂಯುಕ್ತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ / ಉಪ ಪ್ರಾಂಶುಪಾಲರ ಕಾರ್ಯ ಹಂಚಿಕೆಯನ್ನು ಅನುಬಂಧದಲ್ಲಿ ಇರುವಂತೆ ಮಾರ್ಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸ್ವರ್ಣಲತಾ.ಎಂ.ಭಂಡಾರೆ),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಸೇವೆಗಳು–1,2)

ಇವರಿಗೆ:–
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು

ಪ್ರತಿಯನ್ನು:–
1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಆಯುಕ್ತರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು.
4. ಆಯುಕ್ತರು, ಲೋಕ ಶಿಕ್ಷಣ ನಿರ್ದೇಶನಾಲಯ, ಮಲ್ಲೇಶ್ವರಂ, ಬೆಂಗಳೂರು.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ / ಧಾರವಾಡ.
6. ಎಲ್ಲಾ ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿಗಳು, ಜಿಲ್ಲಾ ಪಂಚಾಯತ್. (ಆಯುಕ್ತರು, ಸಾ.ಶಿ.ಇ, ಬೆಂಗಳೂರು, ಇವರ ಮುಖಾಂತರ)
7. ಎಲ್ಲಾ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ. (ಆಯುಕ್ತರು, ಸಾ.ಶಿ.ಇ, ಬೆಂಗಳೂರು, ಇವರ ಮುಖಾಂತರ)
8. ಎಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ. (ಆಯುಕ್ತರು, ಸಾ.ಶಿ.ಇ, ಬೆಂಗಳೂರು, ಇವರ ಮುಖಾಂತರ)
9. ಎಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಮತ್ತು ವೃತ್ತಿ ಶಿಕ್ಷಣ ಇಲಾಖೆ. (ಆಯುಕ್ತರು, ಸಾ.ಶಿ.ಇ, ಬೆಂಗಳೂರು, ಇವರ ಮುಖಾಂತರ)
10. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ
11. ಕಾರ್ಯದರ್ಶಿ / ಅಪರ ಕಾರ್ಯದರ್ಶಿ / ಸಹ ಕಾರ್ಯದರ್ಶಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಇವರ ಆಪ್ತ ಶಾಖೆ.
12. ಶಾಖಾ ರಕ್ಷಾ ಕಡತ // ಹೆಚ್ಚುವರಿ ಪ್ರತಿಗಳು.